**ದಿನಾಂಕಃ 13.08.2025 ರಂದು ಸಾಕ್ಷಿದಾರರು ಹಾಜರಿದ್ದು ಸಾಕ್ಷಿಗೆ ಸತ್ಯ ಪ್ರತಿಜ್ಞೆ ಮಾಡಿಸಲಾಯಿತು.**

**ಪಾಟೀ ಸವಾಲುಃ ವಾದಿ ಪರ ಶ್ರೀ ಎಸ್.ಟಿ.ಎಸ್. ವಕೀಲರಿಂದಃ–**

1. ದಿನಾಂಕಃ02.12.1963 ರ ಕ್ರಯಪತ್ರ ನಿಡಿ–1 ಕ್ಕೆ ನಾನು ಸಾಕ್ಷಿದಾರನಾಗಿ ಸಹಿ ಮಾಡಿರುವುದಿಲ್ಲ. ಸದರಿ ಕ್ರಯದ ವಿಚಾರ ನನಗೆ ಗೊತ್ತಿಲ್ಲ ಎಂದರೆ ಸರಿಯಲ್ಲ. ಸಂಜೀವಪ್ಪ ಮತ್ತು ಓಬಣ್ಣನವರಿಗೆ ಸದರಿ ಕ್ರಯಪತ್ರ ಮಾಡಿಕೊಡಲು ಅಧಿಕಾರ ಇಲ್ಲ ಎಂದು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಸ್ವತ್ತುಗಳನ್ನು ಸಿದ್ದಣ್ಣನಿಂದ ದಿನಾಂಕಃ27.12.1988 ರಂದು ವಾಪಾಸ್ ಪಡೆದ ಬಗ್ಗೆ ಕರಾರು ಪತ್ರ ಮಾಡಿಕೊಂಡ ಬಗ್ಗೆ ನನಗೆ ಗೊತ್ತಿಲ್ಲ ಎಂದರೆ ಸರಿಯಲ್ಲ.

2. ಸದರಿ ಕ್ರಯದ ಕರಾರು ಪತ್ರವನ್ನು ಸಿದ್ದಣ್ಣನವರಿಂದ ರಂಗಸ್ವಾಮಿ, ಹನುಮಂತಪ್ಪ ಮತ್ತು ಸಿದ್ದಪ್ಪ ಎನ್ನುವವರು ಬರೆಸಿಕೊಂಡಿದ್ದಾರೆ. ನಾನು ಈಗ ಹೇಳಿದಂತೆ 1 ರಿಂದ 3 ನೇ ಪ್ರತಿವಾದಿಗಳು ಯಾವುದೇ ಕ್ರಯದ ಕರಾರು ಪತ್ರವನ್ನು ಸಿದ್ದಣ್ಣನವರಿಂದ ಬರೆಸಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಗಳಿಗೆ ಸಹಾಯ ಮಾಡಲು ಎಂದು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

3. ವಾದಿ ಮತ್ತು 1 ರಿಂದ 3 ನೇ ಪ್ರತಿವಾದಿಯರು ದಿನಾಂಕಃ10.01.2000 ರಂದು ನಿಪಿ–2 ರಂತೆ ಪಾಲುವಿಭಾಗ ಮಾಡಿಕೊಂಡಿದ್ದಾರೆ ಎಂದರೆ ಸರಿಯಲ್ಲ. ಸದರಿ ವಿಭಾಗದಲ್ಲಿ ವಾದಿಗೆ ದಾವಾ ಸ್ವತ್ತು ಐಟಂ ನಂಃ1 ರಲ್ಲಿ 28 ಗುಂಟೆ ಜಮೀನು ಬಂದಿರುತ್ತದೆ ಎಂದರೆ ಸರಿಯಲ್ಲ. ಮತ್ತು ದಾವಾ ಐಟಂ ನಂಃ2 ರಲ್ಲಿ 6½ ಗುಂಟೆ ಜಮೀನು ಬಂದಿರುತ್ತದೆ ಎಂದರೆ ಸರಿಯಲ್ಲ. ಈ ವಿಚಾರ ನನಗೆ ಗೊತ್ತಿದ್ದರೂ ಸಹ ಪ್ರತಿವಾದಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಮುಕ್ತ ಹೇಳಿಕೆ ಮತ್ತು ನನ್ನ ಉಕ್ತ ಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ,. ಹಿರಿಯೂರು.